**ದಿನಾಂಕಃ 19-01-2023 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಎಮ್.ಎಸ್.ಬಿ. ವಕೀಲರಿಂದಃ**

ನಾನು ಈ ದಿವಸ ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು ಡಿಸ್ಚಾರ್ಜ ಸಮ್ಮರಿಯನ್ನು ನಿ ಪಿ -18 ಎಂದು, ಒಟ್ಟು 58 ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ ಪಿ-19 ಎಂದು, ಮೂರು ಲ್ಯಾಬ್ ವರದಿಗಳನ್ನು ನಿ ಪಿ -20 ಎಂದು, ಅಂಗನ್ಯೂನತೆ ಪ್ರಮಾಣ ಪತ್ರವನ್ನು ನಿ ಪಿ -21 ಎಂದು, 3 ಎಕ್ಸರೆಗಳನ್ನು ನಿ ಪಿ -22 ಎಂದು ಗುರುತಿಸಲಾಯಿತು.

ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ ಮೂಲ ದಾಖಲೆಗಳ ಜೊತೆ ಅವುಗಳ ನೋಟರಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಮೂಲ ದಾಖಲೆಗಳ ಜೊತೆ ಪರಿಶೀಲಿಸಿದ ನಂತರ ಸದರಿ ದಾಖಲೆಗಳು ದಿನ ಬಳಕೆಗೆ ಬೇಕಾಗಿರುವುದರಿಂದ ಅವುಗಳ ನೋಟರಿ ಪ್ರತಿಗಳನ್ನು ನಿ ಪಿ-23 ರಿಂದ ನಿ ಪಿ- 24 ಎಂದು ಗುರುತಿಸಲಾಯಿತು. ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ ನ್ನು ಅರ್ಜಿದಾರರಿಗೆ ಹಿಂದುರಿಗಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ 4 ನೇ ಎದುರುದಾರರ ಪರ ಶ್ರೀ ಎ. ಎಸ್.ಪಿ. ವಕೀಲರಿಂದಃ**

ಈ ಅರ್ಜಿಯನ್ನು ಎನು ಪರಿಹಾರ ಕೋರಿ ಹಾಕಿದ್ದೀರಾ ಎಂದರೆ ನಾನು ಅಪಘಾತದಲ್ಲಿ ನನ್ನ ಬಲಗಾಲಿನ ಮೂಳೆ ಮುರಿದ ಕಾರಣ ಪರಿಹಾರ ಕೇಳಿ ಈ ಕೇಸನ್ನು ದಾಖಲು ಮಾಡಿರುತ್ತೇನೆ. 4 ನೇ ಎದುರುದಾರರ ಕಂಪನಿಯು ಕೇವಲ ವಾಹನ ಡ್ಯಾಮೇಜ್ ಗಾಗಿ ಮಾತ್ರ ವಿಮಾ ಪಾಲಿಸಿ ನೀಡಿದ್ದಾರೆ ಎಂದರೆ ಸರಿಯಲ್ಲ. ನಾನು ಹಾಕಿರುವ ಪರಿಹಾರ ಕೇಸಿಗೂ ಹಾಗೂ 4 ನೇ ಎದುರುದಾರರಿಗೂ ಯಾವುದೇ ರೀತಿಯ ಸಂಬಂದ ಇಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ.

Sd/-

(ಬಿ.ಸಿದ್ದರಾಜು)

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.